# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೊಂಭತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ: 15ನೇ ಫೆಬ್ರವರಿ, 2023**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

### 02. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

"2023ನೇ ಫೆಬ್ರವರಿ, 10ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:13.02.2023ರಂದು **ಡಾ|| ತೇಜಸ್ವಿನಿ ಗೌಡ** ರವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ:

**ಮೂರನೇ ದಿನ**

### 03. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ನಿರಾಣಿ ಹಣಮಂತ ರುದ್ರಪ್ಪ** ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ನಿರಾಶ್ರಿತರಿಗೆ ಪುನರ್ ವಸತಿ ಕಲ್ಪಿಸುವ ಕುರಿತು ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

02. **ಶ್ರೀ ಕೆ. ಹರೀಶ್ ಕುಮಾರ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಉಪ್ಪಿನ ಅಂಗಡಿ ಪೇಟೆಯ ಮಾರುಕಟ್ಟೆ ಸುತ್ತಮುತ್ತ ತೆರೆದ ಚರಂಡಿ ಬದಲಾಗಿ ಭೂಗತ ಚರಂಡಿಯನ್ನು ನಿರ್ಮಿಸಿ ತ್ಯಾಜ್ಯ ಸಂಸ್ಕರಣೆ ಮಾಡುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

೦3. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರು/ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗೆ ವಯೋಮಿತಿ ಹೆಚ್ಚಿಸುವಲ್ಲಿ ಉಂಟಾಗಿರುವ ತಾರತಮ್ಯದ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

೦4. **ಶ್ರೀ ಯು. ಬಿ. ವೆಂಕಟೇಶ್** ಅವರು ಉಡುಪಿ ಜಿಲ್ಲೆ, ಕಾಪು ತಾಲ್ಲೂಕು ಎಲ್ಲೂರಿನ ಮಹತೋಭಾರ ಶ್ರೀ ವಿಶ್ವೇಶ್ವರ ದೇವಸ್ಥಾನದಲ್ಲಿ ಪುರಾತನ ರೀತಿ ರಿವಾಜುಗಳು, ಸಂಪ್ರದಾಯ ಮತ್ತು ಆಚರಣಾ ಪದ್ಧತಿಗಳನ್ನು ಕೈಬಿಟ್ಟಿರುವ ಕುರಿತು ಮಾನ್ಯ ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

೦1. **ಶ್ರೀ ಪ್ರಕಾಶ್ ಕೆ. ರಾಥೋಡ್** ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಅವರು ರಾಜ್ಯದಲ್ಲಿರುವ ಖಾಸಗಿ ಶಾಲೆಗಳಲ್ಲಿ ಕೇಂದ್ರ ಪಠ್ಯ ಕ್ರಮವನ್ನು ಭೋದಿಸಲು ಶಿಕ್ಷಣ ಇಲಾಖೆಯಿಂದ ಎನ್.ಓ.ಸಿ. ಪಡೆಯಲು ಸಾಧ್ಯವಾಗದೆ ಇರುವ ಶಾಲೆಗಳ ಆಡಳಿತ ಮಂಡಳಿಯವರು ಅಕ್ರಮವಾಗಿ ನಕಲಿ ಎನ್.ಓ.ಸಿ. ಪತ್ರಗಳನ್ನು ನೀಡುತ್ತಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಮರಿತಿಬ್ಬೇಗೌಡ** ಅವರು ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನೀಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರಿಗೆ ಗೌರವಧನ ಹೆಚ್ಚಳ ಹಾಗೂ ಸೇವಾ ಭದ್ರತೆಯನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

**ಕೆ. ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**